**Akashvani : Bangalore**
**National Bulletin In Kannada**
**06.10.2024 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**06.10.2024 / 7.35 am**

**<><*<><>*><>**

## ಮುಖ್ಯಾಂಶಗಳು

೧. ಮೂಲ ಸೌಕರ್ಯ ಯೋಜನೆಗಳಿಂದ ಉದ್ಯಮಕ್ಕೆ ಉತ್ತೇಜನ; ಹೊಸ ಉದ್ಯೋಗಾವಕಾಶಗಳ ಸೃಷ್ಟಿ- ಪ್ರಧಾನಿ ನರೇಂದ್ರ ಮೋದಿ

೨. ವಿಕಸಿತ ಭಾರತದೆಡೆಗೆ ಸ್ಥಿರವಾದ ಹೆಜ್ಜೆಯಿಡಲು ಏಕಕಾಲದ ಚುನಾವಣೆ ಅಳವಡಿಕೆ ಉತ್ತಮ - ಉನ್ನತ ಮಟ್ಟದ ಸಮಿತಿ ಅಧ್ಯಕ್ಷ ರಾಮನಾಥ್ ಕೋವಿಂದ್

೩. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಇಂದಿನಿಂದ ಜರ್ಮನಿ ಪ್ರವಾಸ; ಹ್ಯಾಂಬರ್ಗ್ ಸುಸ್ಥಿರತೆ ಸಮ್ಮೇಳನ ಸೇರಿ ಹಲವು ದ್ವಿಪಕ್ಷೀಯ ಸಭೆಗಳಲ್ಲಿ ಭಾಗಿ

೪. ಮಹಿಳೆಯರ ವಿಶ್ವಕಪ್ ಟಿ-೨೦ ಕ್ರಿಕೆಟ್: ಭಾರತದ ವನಿತೆಯರಿಗೆ ಇಂದು ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ಸವಾಲು

**<><*<><>*><>**

ಮಹಾರಾಷ್ಟ್ರದ ಥಾಣೆ ಜಿಲ್ಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ನಿನ್ನೆ ಸುಮಾರು ೩೨ ಸಾವಿರದ ೮೦೦ ಕೋಟಿ ರೂಪಾಯಿ ವೆಚ್ಚದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಪ್ರಧಾನಿ, ಮೂಲಸೌಕರ್ಯ ಯೋಜನೆಗಳನ್ನು ಕಲ್ಪಿಸುವುದರಿಂದ ಉದ್ಯಮಗಳಿಗೆ ಉತ್ತೇಜನ ಸಿಗುತ್ತದೆ ಮತ್ತು ಹೊಸ ಉದ್ಯೋಗಾವಕಾಶಗಳ ಸೃಷ್ಟಿ ಸಾಧ್ಯವಾಗುತ್ತದೆ. ಮುಂಬೈ ಮತ್ತು ಥಾಣೆಯಂತಹ ನಗರಗಳು ವಿಕಸಿತ ಭಾರತ ಗುರಿಯನ್ನು ಸಾಧಿಸುವ ನಿಟ್ಟಿನಲ್ಲಿ ಸಜ್ಜುಗೊಳಿಸುವುದು ಅಗತ್ಯವಾಗಿದೆ ಎಂದು ಹೇಳಿದರು. ಕೇಂದ್ರ ಸರ್ಕಾರದ ಪ್ರತಿಯೊಂದು ನಿರ್ಧಾರ, ನಿರ್ಣಯ ಹಾಗೂ ಕನಸು ವಿಕಸಿತ ಭಾರತಕ್ಕೆ ಸಮರ್ಪಿತವಾಗಿರುತ್ತದೆ. ಅಭಿವೃದ್ಧಿ ಯೋಜನೆಗಳು ಮುಂಬೈ ಚಿತ್ರಣವನ್ನೇ ಬದಲಿಸಲಿದ್ದು, ಸಾರ್ವಜನಿಕರಿಗೆ ಇದರಿಂದ ಸಾಕಷ್ಟು ಪ್ರಯೋಜನವಾಗುತ್ತದೆ ಎಂದು ಪ್ರಧಾನಿ ಹೇಳಿದರು. ಇದಕ್ಕೂ ಮುನ್ನ ಪ್ರಧಾನಿ ಅವರು, ವಾಷಿಮ್‌ನಲ್ಲಿ ಕೃಷಿ ಮತ್ತು ಪಶುಸಂಗೋಪನೆ ಕ್ಷೇತ್ರಗಳಿಗೆ ಸಂಬಂಧಿಸಿದ ಸುಮಾರು ೨೩ ಸಾವಿರದ ೩೦೦ ಕೋಟಿ ರೂಪಾಯಿ ವೆಚ್ಚದ ಉಪಕ್ರಮಗಳಿಗೆ ಚಾಲನೆ ನೀಡಿದರು. ಅಲ್ಲದೆ, ಬಂಜಾರ ಸಮುದಾಯದ ಶ್ರೀಮಂತ ಪರಂಪರೆಯನ್ನು ಪ್ರತಿಬಿಂಬಿಸುವ ಬಂಜಾರಾ ವಿರಾಸತ್ ಸಂಗ್ರಹಾಲಯವನ್ನು ಉದ್ಘಾಟಿಸಿ, ಸಂಗ್ರಹಾಲಯವನ್ನು ವೀಕ್ಷಿಸಿದರು.

**<><*<><>*><>**

ಮಾಲ್ಡೀವ್ಸ್ ಅಧ್ಯಕ್ಷ ಡಾಕ್ಟರ್ ಮೊಹಮದ್ ಮುಯಿಝು ಅವರು ಇಂದಿನಿಂದ ಐದು ದಿನಗಳ ಕಾಲ ಭಾರತದ ಪ್ರವಾಸ ಕೈಗೊಳ್ಳಲಿದ್ದು, ನವದೆಹಲಿಗೆ ಆಗಮಿಸಲಿದ್ದಾರೆ. ಇದು ಭಾರತಕ್ಕೆ ಅವರ ಮೊದಲ ದ್ವಿಪಕ್ಷೀಯ ಭೇಟಿಯಾಗಿದೆ. ಈ ಪ್ರವಾಸದ ವೇಳೆ ಡಾ.ಮೊಹಮದ್ ಮುಯಿಝು, ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ, ಪ್ರಾದೇಶಿಕ ಮತ್ತು ಪರಸ್ಪರ ಹಿತಾಸಕ್ತಿಗೆ ಸಂಬಂಧಿಸಿದ ಅಂತಾರಾಷ್ಟ್ರೀಯ ವಿಷಯಗಳ ಕುರಿತು ಚರ್ಚೆ ನಡೆಸಲಿದ್ದಾರೆ. ಈ ಪ್ರವಾಸದ ಸಂದರ್ಭದಲ್ಲಿ ಮಾಲ್ಡೀವ್ಸ್ ಅಧ್ಯಕ್ಷರು ಬೆಂಗಳೂರು ಹಾಗೂ ಮುಂಬೈಗೂ ಅವರು ಭೇಟಿ ನೀಡಲಿದ್ದು, ವ್ಯಾಪಾರಕ್ಕೆ ಸಂಬಂಧಿಸಿದ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ. ಮಾಲ್ಡೀವ್ಸ್, ಭಾರತದ ಕಡಲ ನೆರೆಯ ಪ್ರಮುಖ ರಾಷ್ಟ್ರವಾಗಿದೆ. ಅಲ್ಲದೆ, ಸಾಗರ ಪ್ರದೇಶದಲ್ಲಿ ಸುರಕ್ಷತೆ ಮತ್ತು ಬೆಳವಣಿಗೆ ಸಂಬಂಧಿಸಿದ ಪ್ರಧಾನಮಂತ್ರಿಯವರ ದೃಷ್ಟಿಕೋನದಲ್ಲಿ ವಿಶೇಷವಾದ ಸ್ಥಾನ ಹೊಂದಿದೆ. ಮಾಲ್ಡೀವ್ಸ್ ಅಧ್ಯಕ್ಷರ ಭಾರತದ ಭೇಟಿಯಿಂದಾಗಿ ಎರಡೂ ದೇಶಗಳ ನಡುವೆ ಮತ್ತಷ್ಟು ಬಾಂಧವ್ಯ ವೃದ್ಧಿಗೆ ನೆರವಾಗಲಿದೆ.

**<><*<><>*><>**

ವಿಕಸಿತ ಭಾರತದೆಡೆಗೆ ದೇಶ ಸ್ಥಿರವಾದ ಹೆಜ್ಜೆಯನ್ನಿಡಲು ಭಾರತವು ಏಕಕಾಲದ ಚುನಾವಣೆಗಳನ್ನು ಅಳವಡಿಸಿಕೊಳ್ಳುವುದರಿಂದ ಹೆಚ್ಚಿನ ಪ್ರಯೋಜನ ಪಡೆಯಲಿದೆ ಎಂದು ಒಂದು ರಾಷ್ಟ್ರ-ಒಂದು ಚುನಾವಣೆಯ ಉನ್ನತ ಮಟ್ಟದ ಸಮಿತಿಯ ನೇತೃತ್ವ ವಹಿಸಿರುವ ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಏಕಕಾಲಕ್ಕೆ ಚುನಾವಣೆ ಕುರಿತು ೩೦ನೇ ಲಾಲ್ ಬಹದ್ದೂರ್ ಶಾಸ್ತ್ರಿ ಸ್ಮಾರಕ ಉಪನ್ಯಾಸ ನೀಡಿದ ವೇಳೆ ಮಾತನಾಡಿದ ಅವರು, ಏಕಕಾಲಿಕ ಚುನಾವಣೆಗಳಿಂದ ಉತ್ತಮ ಆಡಳಿತ, ನೀತಿ ಸ್ಥಿರತೆ, ಸಾಮಾಜಿಕ ಒಗ್ಗಟ್ಟು, ಆರ್ಥಿಕ ಬೆಳವಣಿಗೆ ಮತ್ತು ವರ್ಧಿತ ಜಾಗತಿಕ ಸ್ಪರ್ಧಾತ್ಮಕತೆಯಂತಹ ದೀರ್ಘಾವಧಿಯ ಪ್ರಯೋಜನಗಳಿವೆ ಎಂದರು.

**<><*<><>*><>**

ಸುಸ್ಥಿರ ಅಭಿವೃದ್ಧಿ ಮತ್ತು ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಭಾರತದ ಸಹಕಾರ ಬಲಪಡಿಸಲೆಂದು ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಇಂದಿನಿಂದ ಮೂರು ದಿನ ಜರ್ಮನಿ ಪ್ರವಾಸ ಕೈಗೊಳ್ಳಲಿದ್ದಾರೆ. ನವದೆಹಲಿಯಿಂದ ಜರ್ಮನಿಗೆ ಪ್ರಯಾಣ ಬೆಳೆಸಿರುವ ಪ್ರಲ್ಹಾದ್ ಜೋಶಿ, ನಾಳೆ ಮತ್ತು ನಾಡಿದ್ದು ಹ್ಯಾಂಬರ್ಗ್ ಸುಸ್ಥಿರತೆ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ಈ ಸಮ್ಮೇಳನದಲ್ಲಿ ಹಸಿರು ಇಂಧನ ಕ್ಷೇತ್ರದಲ್ಲಿನ ಪ್ರಮುಖ ಉದ್ಯಮಿಗಳು ಕೂಡ ಭಾಗವಹಿಸಲಿದ್ದಾರೆ. ಹ್ಯಾಂಬರ್ಗ್ ಸಮ್ಮೇಳನದಲ್ಲಿ ಹಸಿರು ಶಿಪ್ಪಿಂಗ್ ಮತ್ತು ಚಲನಶೀಲ ವಲಯವನ್ನು ಡಿಕಾರ್ಬನೈಸ್ ಮಾಡುವಲ್ಲಿ ಹಸಿರು ಹೈಡ್ರೋಜನ್ ಪಾತ್ರದ ಬಗ್ಗೆ ಭಾರತದ ಸ್ಥಾನವನ್ನು ಸಚಿವರು ಪ್ರತಿಪಾದಿಸಲಿದ್ದಾರೆ. ನವೀಕರಿಸಬಹುದಾದ ಇಂಧನ ಮತ್ತು ಸುಸ್ಥಿರ ಅಭಿವೃದ್ಧಿ ಕ್ಷೇತ್ರಗಳಲ್ಲಿ ಭಾರತವು ಅಂತಾರಾಷ್ಟ್ರೀಯ ಸಹಯೋಗ ಬಲಪಡಿಸುವ ಗುರಿ ಹೊಂದಿದ್ದು, ಜರ್ಮನಿ ಪ್ರವಾಸದಿಂದ ಇದು ಸಾಕಾರಗೊಳ್ಳುವ ನಿರೀಕ್ಷೆಯಿದೆ. ಸುಸ್ಥಿರ ಅಭಿವೃದ್ಧಿ, ಹಸಿರು ಹೈಡ್ರೋಜನ್, ಆರ್ಥಿಕ ನೆರವು ಹೆಚ್ಚಳಕ್ಕೆ ಅಗತ್ಯ ಸಹಕಾರ ಕುರಿತಂತೆ ಜರ್ಮನಿ, ಯುನೈಟೆಡ್ ಕಿಂಗ್‌ಡಮ್ ಮತ್ತು ಇತರ ರಾಷ್ಟ್ರಗಳ ಹಿರಿಯ ಅಧಿಕಾರಿಗಳೊಂದಿಗೆ ಪ್ರಲ್ಹಾದ್ ಜೋಶಿ ಅವರು ದ್ವಿಪಕ್ಷೀಯ ಸಭೆ ನಡೆಸಲಿದ್ದಾರೆ. ಕೇಂದ್ರ ಸಚಿವರ ಈ ಪ್ರವಾಸದಿಂದ ಭಾರತ ಮತ್ತು ಜರ್ಮನಿ ಸಂಬಂಧ ಮತ್ತಷ್ಟು ವೃದ್ಧಿಸಲಿದೆ. ಅಲ್ಲದೆ, ವಿಶ್ವದಾದ್ಯಂತ ನವೀಕರಿಸಬಹುದಾದ ಶಕ್ತಿಯ ವಿಸ್ತರಣೆಯನ್ನು ವೇಗಗೊಳಿಸಲು ಸಾಧ್ಯವಾಗಲಿದೆ.

<><*<><>*><>=

ಆಂಧ್ರಪ್ರದೇಶದ ವಿಶಾಖಪಟ್ಟಣದಲ್ಲಿ ಇದೇ ೮ ರಿಂದ ನೌಕಾ ಸಮರಾಭ್ಯಾಸ ಮಲ್ಬಾರ್-೨೦೨೪ ಆರಂಭವಾಗಲಿದೆ. ಈ ವರ್ಷ ಭಾರತ ಈ ಸಮಾರಾಭ್ಯಾಸವನ್ನು  ಮುನ್ನೆಡಸಲಿದೆ. ಅಮೆರಿಕ, ಆಸ್ಟ್ರೇಲಿಯಾ ಮತ್ತು ಜಪಾನ್ ಈ ಸಮರಾಭ್ಯಾಸದಲ್ಲಿ ಪಾಲ್ಗೊಳ್ಳಲಿವೆ.  ಈ ಸಮರಾಭ್ಯಾಸವು ವಿಶೇಷ ಕಾರ್ಯಾಚರಣೆಗಳು, ಮೇಲ್ಮೈ, ವಾಯು ಮತ್ತು ಜಲಾಂತರ್ಗಾಮಿ ವಿರೋಧಿ ಯುದ್ಧದ ಚರ್ಚೆಗಳನ್ನು ಒಳಗೊಂಡಂತೆ ಸಹಕಾರ ಮತ್ತು ಕಾರ್ಯಾಚರಣೆಯ ಸಾಮರ್ಥ್ಯಗಳನ್ನು ಹೆಚ್ಚಿಸಲು ವಿನ್ಯಾಸಗೊಳಿಸಲಾದ ಚಟುವಟಿಕೆಗಳ ಮೇಲೆ ಕೇಂದ್ರೀಕರಿಸುತ್ತದೆ.  ಈ ವೇಳೆ ಕ್ಷಿಪಣಿ ವಿಧ್ವಂಸಕಗಳು, ಬಹುಪಯೋಗಿ ಯುದ್ಧ ನೌಕೆಗಳು, ಜಲಾಂತರ್ಗಾಮಿ ನೌಕೆಗಳು, ಯುದ್ಧ ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳು ಸೇರಿದಂತೆ ಭಾರತೀಯ ನೌಕಾಪಡೆಯ ಸಾಮರ್ಥ್ಯ ಅನಾವರಣಗೊಳ್ಳಲಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

<><*<><>*><>

ದೇಶದ ಹಲವು ಭಾಗಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರ್ನಾಟಕದ ದಕ್ಷಿಣ ಒಳನಾಡು ಹಾಗೂ ಅರುಣಾಚಲ ಪ್ರದೇಶ, ಅಸ್ಸಾಂ, ಮೇಘಾಲಯ, ತಮಿಳುನಾಡು, ಪುದುಚರಿ, ಕೇರಳ ಹಾಗೂ ಮತ್ತಿತರ ಪ್ರದೇಶಗಳಲ್ಲಿ ಮುಂದಿನ ಮೂರು ದಿನಗಳ ಕಾಲ ಧಾರಾಕಾರ ಮಳೆಯಾಗಲಿದೆ ಎಂದು ತಿಳಿಸಲಾಗಿದೆ. ನಿನ್ನೆ ರಾತ್ರಿ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಿದೆ. ರಾಜಧಾನಿ ಬೆಂಗಳೂರಿನಲ್ಲಿ ನಿನ್ನೆ ಸಂಜೆಯಿಂದ ರಾತ್ರಿವರೆಗೆ ಹೆಚ್ಚು ಮಳೆಯಾಗಿದ್ದು, ಹಲವೆಡೆ ಮರಗಳು ಉರುಳಿ ಬಿದ್ದಿವೆ. ಇದರಿಂದ ಸಾಮಾನ್ಯ ಜನ ಜೀವನ ಅಸ್ತವ್ಯಸ್ಥಗೊಂಡು ಸಂಚಾರಕ್ಕೂ ಅಡ್ಡಿ ಉಂಟಾಯಿತು.

<><*<><>*><>

ಪಾಕಿಸ್ತಾನದ ಇಸ್ಲಾಮಾಬಾದ್‌ನಲ್ಲಿ ಇದೇ ೧೫, ೧೬ರಂದು ನಡೆಯಲಿರುವ ಶಾಂಘೈ ಸಹಕಾರ ಸಂಘ-ಎಸ್‌ಸಿಒ ಶೃಂಗಸಭೆಯಲ್ಲಿ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್.ಜೈಶಂಕರ್ ಪಾಲ್ಗೊಳ್ಳಲಿದ್ದಾರೆ ಎಂದು  ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್  ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಭಾರತೀಯ ನ್ಯಾಯಪ್ರಕ್ರಿಯೆಗಳಿಂದ ಪಲಾಯನಗೈದ್ದಿರುವ ಝಾಕೀರ್ ನಾಯಕ್‌ಗೆ  ಪಾಕಿಸ್ತಾನದಲ್ಲಿ ಉನ್ನತ ಮಟ್ಟದ ಸ್ವಾಗತ ಲಭಿಸಿರುವುದು ಭಾರತಕ್ಕೆ ಆಶ್ಚರ್ಯವಿಲ್ಲ. ಈ ಬೆಳವಣಿಗೆ ಖಂಡನೀಯ ಎಂದು ಹೇಳಿದರು.

<><*<><>*><>

ಹರಿಯಾಣ ರಾಜ್ಯ ವಿಧಾನಸಭೆಯ ೯೦ ಕ್ಷೇತ್ರಗಳಿಗೆ ನಿನ್ನೆ ನಡೆದ ಚುನಾವಣೆಯಲ್ಲಿ ಶೇಕಡ ೬೭ ರಷ್ಟು ದಾಖಲೆಯ ಮತದಾನವಾಗಿದೆ. ಬೆಳಗ್ಗೆ ೭ ಗಂಟೆಗೆ ಆರಂಭವಾದ ಮತದಾನ ಸಂಜೆ ೬ ಗಂಟೆಗೆ ಮುಕ್ತಾಯವಾಯಿತು.  ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಅಲ್ಲದೆ, ಇತರೆ ಚುನಾವಣಾ ಆಯುಕ್ತರುಗಳಾದ ಗ್ಯಾನೇಶ್ ಕುಮಾರ್ ಮತ್ತು ಡಾ.ಸುಖಬೀರ್ ಸಿಂಗ್ ಸಂಧು ಚುನಾವಣಾ ಪ್ರಕ್ರಿಯೆ ಮೇಲೆ ಸಂಪೂರ್ಣ ನಿಗಾ ವಹಿಸಿದ್ದರು. ಒಟ್ಟು ೨೦ ಸಾವಿರದ ೬೩೨

ಮತಗಟ್ಟೆಗಳಲ್ಲಿ ನಡೆದ ಮತದಾನದಲ್ಲಿ, ೧ ಸಾವಿರದ ೩೧ ಅಭ್ಯರ್ಥಿಗಳ ಭವಿಷ್ಯ ಮತಪೆಟ್ಟಿಗೆಯಲ್ಲಿ ಭದ್ರವಾಗಿದೆ. ಇದೇ ೮ ರಂದು ಜಮ್ಮು ಮತ್ತು ಕಾಶ್ಮೀರ ವಿಧಾನಸಭಾ ಚುನಾವಣೆ ಜೊತೆಗೆ ಹರಿಯಾಣ ವಿಧಾನಸಭಾ ಚುನಾವಣೆಯ ಮತ ಎಣಿಕೆ ಕಾರ್ಯ ನಡೆಯಲಿದೆ.

<><*<><>*><>

ಚೆನ್ನೈನ ಮರಿನಾ ಬೀಚ್‌ನಲ್ಲಿಂದು ಭಾರತೀಯ ವಾಯುಪಡೆ ವತಿಯಿಂದ ವೈಮಾನಿಕ ಪ್ರದರ್ಶನ ಏರ್ಪಡಿಸಲಾಗಿದೆ. ವಾಯುಪಡೆ ದಿನದ ೯೨ನೇ ವರ್ಷಾಚರಣೆಯ ಹಿನ್ನೆಲೆಯಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ. ಸುಮಾರು ೭೨ ವಿಮಾನಗಳು ಪ್ರದರ್ಶನ ನೀಡಲಿದ್ದು, ಅಂದಾಜು ೧೫ ಲಕ್ಷ ಜನರು ವೀಕ್ಷಣೆ ಮಾಡಲಿದ್ದಾರೆ. ಇದು ಈ ವರ್ಷದ ಲಿಮ್ಕಾ ದಾಖಲೆ ಪುಸ್ತಕಕ್ಕೆ ಸೇರ್ಪಡೆಯಾಗುವ ಸಾಧ್ಯತೆ ಇದೆ. ತೇಜಸ್, ಮಿರಾಗ್, ಸುಖೋಯ್, ಜಾಗ್ವಾರ್‌ನಂತಹ ಕೆಲ ಯುದ್ಧ ವಿಮಾನಗಳು ಈ ವೈಮಾನಿಕ ಪ್ರದರ್ಶನ ಕೇಂದ್ರಬಿಂದುವಾಗಿವೆ.

<><*<><>*><>

ದುಬೈನಲ್ಲಿ ನಡೆಯುತ್ತಿರುವ ಮಹಿಳೆಯರ ಟಿ-೨೦ ವಿಶ್ವಕಪ್ ಕ್ರಿಕೆಟ್ ಟೂರ್ನಿಯ ಪಂದ್ಯದಲ್ಲಿ ಭಾರತ ತಂಡದ ವನಿತೆಯರು ತಮ್ಮ ಎರಡನೇ ಪಂದ್ಯದಲ್ಲಿ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ತಂಡವನ್ನು ಎದುರಿಸಲಿದ್ದಾರೆ. ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಭಾರತೀಯ ಕಾಲಮಾನ ಮಧ್ಯಾಹ್ನ ೩.೩೦ಕ್ಕೆ ಪಂದ್ಯ ಆರಂಭವಾಗಲಿದೆ. ಕಳೆದ ಶುಕ್ರವಾರ ನಡೆದ 'ಎ' ಗುಂಪಿನ ತನ್ನ ಮೊದಲ ಪಂದ್ಯದಲ್ಲಿ ಹರ್ಮನ್‌ಪ್ರೀತ್ ಕೌರ್ ನಾಯಕತ್ವದ ಭಾರತ ತಂಡ ೫೮ ರನ್‌ಗಳಿಂದ ನ್ಯೂಜಿಲೆಂಡ್ ತಂಡದ ಎದುರು ಸೋಲನುಭವಿಸಿತ್ತು. ಹಾಗಾಗಿ, ಸೆಮಿಫೈನಲ್ ಸುತ್ತಿಗೆ ಅರ್ಹತೆ ಪಡೆಯಬೇಕಾದರೆ, ಭಾರತದ ಆಟಗಾರ್ತಿಯರು ಇಂದು ಪಾಕಿಸ್ತಾನ ವಿರುದ್ಧ ಜಯಗಳಿಸಲೇಬೇಕು. ಅಲ್ಲದೆ, ನಂತರದ ಗುಂಪಿನ ಪಂದ್ಯಗಳಾದ ಶ್ರೀಲಂಕಾ ಮತ್ತು ಆಸ್ಟ್ರೇಲಿಯಾ ವಿರುದ್ಧವೂ ಉತ್ತಮ ಪ್ರದರ್ಶನ ನೀಡಿ ಗೆಲುವು ದಕ್ಕಿಸಿಕೊಂಡರೆ ನಾಕೌಟ್ ಹಂತ ಸುಲಭವಾಗಲಿದೆ. ಮತ್ತೊಂದೆಡೆ ಪಾಕಿಸ್ತಾನ ತಂಡ ತನ್ನ ಮೊದಲ ಪಂದ್ಯದಲ್ಲಿ ಶ್ರೀಲಂಕಾ ವಿರುದ್ಧ ಜಯಗಳಿಸಿ ಶುಭಾರಂಭ ಮಾಡಿದೆ.

<><*<><>*><>

ಭಾರತ ಮತ್ತು ಬಾಂಗ್ಲಾದೇಶ ತಂಡಗಳ ನಡುವೆ ಗ್ವಾಲಿಯರ್‌ನಲ್ಲಿಂದು ಮೂರು ಪಂದ್ಯಗಳ ಟಿ-೨೦ ಕ್ರಿಕೆಟ್ ಸರಣಿಯ ಮೊದಲ ಪಂದ್ಯ ನಡೆಯಲಿದೆ. ಗ್ವಾಲಿಯರ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿರಾತ್ರಿ ೭ ಗಂಟೆಗೆ ಪಂದ್ಯ ಆರಂಭವಾಗಲಿದೆ. ಬಾಂಗ್ಲಾದೇಶ ವಿರುದ್ಧ ಇತ್ತೀಚೆಗೆ ಸ್ವದೇಶದಲ್ಲಿಯೇ ನಡೆದ ಎರಡು ಪಂದ್ಯಗಳ ಟೆಸ್ಟ್ ಸರಣಿಯನ್ನು ಟೀಂ ಇಂಡಿಯಾ ೨-೦ ಅಂತರದಲ್ಲಿಕ್ಲೀನ್‌ಸ್ವೀಪ್ ಮಾಡಿಕೊಂಡಿತ್ತು. ಟೆಸ್ಟ್ ಸರಣಿಯಲ್ಲಿರೋಹಿತ್ ಶರ್ಮಾ ನಾಯಕತ್ವದ ಜವಾಬ್ದಾರಿ ನಿಭಾಯಿಸಿದ್ದರು. ಈಗ ಟಿ-೨೦ ಸರಣಿಯಲ್ಲಿಸೂರ್ಯಕುಮಾರ್ ಯಾದವ್ ಭಾರತ ತಂಡವನ್ನು ಮುನ್ನಡೆಸುತ್ತಿದ್ದಾರೆ. ಟಿ-೨೦ ವಿಶ್ವಕಪ್ ಗೆದ್ದ ತಂಡದ ಸದಸ್ಯರಾದ ಸೂರ್ಯಕುಮಾರ್ ಯಾದವ್, ಹಾರ್ದಿಕ್ ಪಾಂಡ್ಯ, ಶಿವಂ ದುಬೆ, ಅರ್ಷ್‌ದೀಪ್ ಸಿಂಗ್ ತಂಡಕ್ಕೆ ಬಲ ತುಂಬಿದ್ದಾರೆ. ಇನ್ನುಳಿದಂತೆ ಸಂಜು ಸ್ಯಾಮ್ಸನ್, ಅಭಿಷೇಕ್ ಶರ್ಮ ಸೇರಿದಂತೆ ಮತ್ತಿತರ ಆಟಗಾರರ ಮೇಲೆ ಹೆಚ್ಚಿನ ನಿರೀಕ್ಷೆ ಇದೆ. ಶುಭಮನ್ ಗಿಲ್, ರಿಷಭ್ ಪಂತ್, ಯಶಸ್ವಿ ಜೈಸ್ವಾಲ್, ಮೊಹಮ್ಮದ್ ಸಿರಾಜ್ ಮತ್ತು ಅಕ್ಷರ್ ಪಟೇಲ್‌ಗೆ ಈ ಪಂದ್ಯದಿಂದ ವಿಶ್ರಾಂತಿ ನೀಡಲಾಗಿದೆ. ಬಾಂಗ್ಲಾದೇಶ ತಂಡದಲ್ಲೂ

ಪ್ರತಿಭಾನ್ವಿತ ಆಟಗಾರರಾಗಿದ್ದು, ನಜ್ಮುಲ್ ಹುಸೇನ್ ಶಾಂಟೊ ನಾಯಕತ್ವದಲ್ಲಿ ಉತ್ತಮ ಪ್ರದರ್ಶನ ನೀಡುವ ವಿಶ್ವಾಸದಲ್ಲಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೦೦ ಕ್ಕೆ <>*><>**